ಆ) ಹೌದು.

ಇ) ಸದ್ಯಕ್ಕೆ ಸರ್ಕಾರದ ಇಂತಹ ಉದ್ದೇಶವಿರುವುದಿಲ್ಲ.

ಚನ್ನಗಿರಿ ತಾಲ್ಲೂಕಿನಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗ ತೆರೆಯುವುದು.

2765 (3398) ಶ್ರೀ ವಡ್ನಾಳ್ ರಾಜಣ್ಣ (ಚೆನ್ನಗಿರಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಚೆನ್ನಗಿರಿ ತಾಲ್ಲೂಕಿನಲ್ಲಿ ಬರುವ ಸಂತೆ ಬೆನ್ನೂರು, ತ್ಯಾವಣಗಿ, ಬಸವಕಲ್ಯಾಣ, ನಲ್ಲೂರು, ತಾವರೆಕೆರೆಗಳಲ್ಲಿ ಇರುವ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳನ್ನು ಎಂದು ತೆರೆಯಲಾಗುವುದು?

2) ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ ಎಷ್ಟು?

3) ಕೊಠಡಿಗಳ ಕೊರತೆಯನ್ನು ನಿವಾರಿಸಲು ತೆಗೆದುಕೊಂಡಿರುವ ಕ್ರಮಗಳೇನು?

4) ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಸಂಖ್ಯೆ ಎಷ್ಟು?

5) ಖಾಲಿ ಇರುವ ಹುದ್ದೆಗಳನ್ನು ಬರುವ ಶೈಕ್ಷಣಿಕ ವರ್ಷದ ಪ್ರಾರಂಭದ ಮೊದಲೇ ತುಂಬಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

1) ಚೆನ್ನಗಿರಿ ತಾಲ್ಲೂಕಿನ ಸಂತೆಬೆನ್ನೂರಿನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಜ್ಞಾನ ವಿಭಾಗವಿದೆ. ತ್ಯಾವಣಗಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ವಿಜ್ಞಾನ ವಿಷಯ ಅಪೇಕ್ಷಿಸಿ ಮುಂದೆ ಬಂದಲ್ಲಿ ವಿಜ್ಞಾನ ವಿಭಾಗವನ್ನು ತೆರೆಯಲಾಗುವುದು. ತಾವರೆಕೆರೆ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಥಮ ಪಿಯುಸಿಯಲ್ಲಿ 52 ಹಾಗೂ ದ್ವಿತೀಯ ಪಿಯುಸಿಯಲ್ಲಿ 16 ವಿದ್ಯಾರ್ಥಿಗಳಿದ್ದಾರೆ ಯಾದ್ದರಿಂದ, ವಿಜ್ಞಾನ ವಿಭಾಗದ ಅವಶ್ಯಕತೆಯಲ್ಲ. ಬಸವ ಕಲ್ಯಾಣ ಹಾಗೂ ನಲ್ಲೂರುಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಲ್ಲ.

2) ಚೆನ್ನಗಿರಿ ಮತ್ತು ತ್ಯಾವಣಗಿ ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ಹೆಚ್ಚುವರಿ ಕೊಠಡಿಗಳ ಅವಶ್ಯಕತೆ ಇದೆ.

3) ಈ ಎರಡು ಪದವಿ ಪೂರ್ವ ಕಾಲೇಜುಗಳ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಕಾಮಗಾರಿಗಾಗಿ ತಲಾ ರೂ. 6.00ಲಕ್ಷಗಳ ಅಂದಾಜನ್ನು ತಯಾರಿಸಲಾಗಿದ್ದು 1999-200ಕ್ಕೆ ತಲಾ ರೂ. 2.00 ಲಕ್ಷಗಳನ್ನು ಮಂಜೂರು ಮಾಡಲು ಪರಿಗಣಿಸಲಾಗುವುದು ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು.

4) ಸಂತೆ ಬೆನ್ನೂರು, ತ್ಯಾವಣಗಿ ಹಾಗೂ ತಾವರೆಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 20 ಉಪನ್ಯಾಸಕರಿದ್ದಾರೆ.

5) ತಾವರೆಕೆರೆಯಲ್ಲಿ ಇತಿಹಾಸ ಹಾಗೂ ರಾಜ್ಯಶಾಸ್ತ್ರ ವಿಷಯಗಳಲ್ಲಿ ಹುದ್ದೆ ಖಾಲಿಯಿದ್ದರೂ ವಾರದಲ್ಲಿ 8 ಗಂಟೆಗಳ ಕಾರ್ಯಭಾರವಿರುವುದರಿಂದ ಹತ್ತಿರದ ಕಾಲೇಜುಗಳಿಂದ ನಿಯೋಜನೆ ಮೂಲಕ ಕೊರತೆ ನೀಗಿಸಲಾಗುವುದು.

ಚನ್ನಗಿರಿ ಕ್ಷೇತ್ರದಲ್ಲಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸುವ ಕುರಿತು

2766 (3399) ಶ್ರೀ ವಡ್ನಾಳ್ ರಾಜಣ್ಣ (ಚನ್ನಗಿರಿ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚೆನ್ನಗಿರಿ ಕ್ಷೇತ್ರದಲ್ಲಿ ಬರುವ ತ್ಯಾವಣಗಿ ಸಂತೆ ಬೆನ್ನೂರು ಮತ್ತು ಬಸವಪಟ್ಟಣಗಳಲ್ಲಿ ಪ್ರಥಮ ದರ್ಜೆ ಕಾಲೇಜುಗಳನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಆ) ಚನ್ನಗಿರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎಷ್ಟು ಕೊಠಡಿಗಳ ಅವಶ್ಯಕತೆ ಇದೆ?

ಇ) ಅವಶ್ಯಕತೆಯಿರುವ ಕೊಠಡಿಗಳ ನಿರ್ಮಾಣವನ್ನು ಎಂದು ಕೈಗೆತ್ತಿಕೊಳ್ಳಲಾಗುವುದು?

ಈ) ಪ್ರಥಮ ದರ್ಜೆ ಕಾಲೇಜಿನಲ್ಲಿ ಅವಶ್ಯವಿರುವ ಉಪನ್ಯಾಸಕರ ಹುದ್ದೆಗಳು ಎಷ್ಟು?

ಉ) ಖಾಲಿ ಇರುವ ಹುದ್ದೆಗಳನ್ನು ಬರುವ ಶೈಕ್ಷಣಿಕ ವರ್ಷ ಪ್ರಾರಂಭವಾಗುವ ಮುನ್ನ ತುಂಬಲು ಕ್ರಮ ತೆಗೆದುಕೊಳ್ಳಲಾಗುವುದೇ?

ಊ) ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ಪ್ರಯೋಗ ಶಾಲೆಯ ಅವಶ್ಯವಿರುವ ವಿವಿಧ ಸಾಮಗ್ರಿಗಳನ್ನು ಎಂದು ಪೂರೈಸಲಾಗುವುದು?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು):

ಅ) ಸದ್ಯಕ್ಕೆ ಸ್ಥಾಪಿಸಲು ಸಾಧ್ಯವಿಲ್ಲ.

ಆ) 4 ಕೊಠಡಿಗಳ ಅವಶ್ಯಕತೆ ಇರುತ್ತದೆ.

ಇ) ಸದ್ಯಕ್ಕೆ ಪರ್ಯಾಯ ವ್ಯವಸ್ಥೆ ಮಾಡಲು ಕ್ರಮ ಜರುಗಿಸಲಾಗುವುದು.

ಈ) ಇಂಗ್ಲೀಷ್ - 1

ಇತಿಹಾಸ - 1

ರಾಜ್ಯಶಾಸ್ತ್ರ - 1

ಉ) ಸಾರ್ವತ್ರಿಕ ವರ್ಗಾವಣೆಯಲ್ಲಿ ತುಂಬಲು ಕ್ರಮ ಕೈಗೊಳ್ಳಲಾಗುವುದು.

ಊ) ವಿಜ್ಞಾನ ಪ್ರಯೋಗ ಶಾಲೆಯ ವಿವಿಧ ಸಾಮಗ್ರಿಗೆಂದು 1999-2000ನೇ ಸಾಲಿನ ಯೋಜನೆಯಡಿಯಲ್ಲಿ ರೂ. 40,000-00 ಮತ್ತು ಯೋಜನೇತರ ಅಡಿಯಲ್ಲಿ ರೂ. 35,000-00 ಹಣ ಬಿಡುಗಡೆ ಮಾಡಲಾಗಿದೆ.